ಶಿಕ್ಷಣದ ಹಕ್ಕು

ಸರ್ವ ಶಿಕ್ಷಣ ಅಭಿಯಾನ

ಎಲ್ಲರೂ ಕಲಿಯೋಣ–ಎಲ್ಲರೂ ಬೆಳೆಯೋಣ

**ರಾಜ್ಯ ಯೋಜನಾ ನಿರ್ದೇಶಕರ ಕಛೇರಿ,ಹೊಸ ಸಾರ್ವಜನಿಕ ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು – 560 001**

ಸಂಖ್ಯೆ: ಸಶಿಅ/ಆ/ಸಿ5/ಬಿ.ಆರ್.ಪಿ/ಸಿ.ಆರ್.ಪಿ/04/2017–18 ದಿನಾಂಕ: 05–04–2017

**ತಿದ್ದುಪಡಿ ಆದೇಶ**

ವಿಷಯ: 2017–18 ನೇ ಸಾಲಿಗೆ ಬ್ಲಾಕ್ ಸಂಪನ್ಮೂಲ ವ್ಯಕ್ತಿ ಮತ್ತು ಸಮೂಹ ಸಂಪನ್ಮೂಲ ವ್ಯಕ್ತಿಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು.

ಉಲ್ಲೇಖ: 1) ಈ ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ: ಸಶಿಅ/ಆ/ಸಿ5/ಬಿ.ಆರ್.ಪಿ/ಸಿ.ಆರ್.ಪಿ/ಪರೀಕ್ಷೆ/2017, ದಿನಾಂಕ: 09.03.2017, 13.03.2017 ಹಾಗೂ 24.03.2017.

2) ಸರ್ಕಾರದ ಆದೇಶ ಸಂಖ್ಯೆ : ಇಡಿ 644 ಪಿಬಿಎಸ್ 2010, ಬೆಂಗಳೂರು, ದಿನಾಂಕ : 01.04.2011

3) ಆಯುಕ್ತರು, ಸಾ.ಶಿ.ಇ. ಬೆಂಗಳೂರು, ರವರ ಸುತ್ತೋಲೆ ಸಂಖ್ಯೆ: ಸಿ3(2) ಪ್ರಾ.ಶಿ/ಇತರೆ ಸುತ್ತೋಲೆ/2016–17, ದಿನಾಂಕ: 02.07.2016.

4) ಅಧ್ಯಕ್ಷರು, ಕ.ರಾ.ಪ್ರಾ.ಶಾ.ಶಿ. ಸಂಘ (ರಿ) ಬೆಂಗಳೂರು ಇವರ ಮನವಿ.

5) ಜಿಲ್ಲೆಗಳ ಉಪನಿರ್ದೇಶಕರು (ಆ), ಇವರ ಮನವಿ.

ಉಲ್ಲೇಖ (1) ರಲ್ಲಿನ ಜ್ಞಾಪನದಂತೆ ಜಿಲ್ಲೆಗಳಲ್ಲಿ ಬಿ.ಆರ್.ಪಿ./ಸಿ.ಆರ್.ಪಿಗಳ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರಲ್ಲಿ ಮೂರು ವರ್ಷ ಪೂರ್ಣಗೊಂಡವರನ್ನು ದಿನಾಂಕ: 07–04–2017 ರಂದು ಕೌನ್ಸಿಲಿಂಗ್ ಮೂಲಕ ಶಾಲೆಗಳಿಗೆ ಸ್ಥಳನಿಯುಕ್ತಿಗೊಳಿಸಲು ಆದೇಶಿಸಲಾಗಿತ್ತು.

ಉಲ್ಲೇಖ 4 ಮತ್ತು 5 ರಂತೆ ಅಧ್ಯಕ್ಷರು, ಕ.ರಾ.ಪ್ರಾ.ಶಾ.ಶಿ. ಸಂಘ (ರಿ), ಬೆಂಗಳೂರು ಹಾಗೂ ಕೆಲವು ಜಿಲ್ಲೆಗಳ ಉಪನಿರ್ದೇಶಕರು (ಆ) ರವರು ಸದರಿ ಕೌನ್ಸಿಲಿಂಗ್ ದಿನಾಂಕವನ್ನು ಬದಲಾಯಿಸಿ ಕೊಡುವಂತೆ ಮನವಿ ನೀಡಿರುತ್ತಾರೆ. ಸದರಿ ಮನವಿಗಳನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

ಲಿಖಿತ ಪರೀಕ್ಷೆ ಮೂಲಕ 2017–18 ನೇ ಸಾಲಿಗೆ ಬಿ.ಆರ್.ಪಿ/ಸಿ.ಆರ್.ಪಿ ಗಳಾಗಿ ಆಯ್ಕೆಯಾದವರಿಗೆ ಹಾಗೂ ಬಿ.ಆರ್.ಪಿ/ಸಿ.ಆರ್.ಪಿ.ಗಳಾಗಿ ದಿ:31.03.2017 ಕ್ಕೆ 03 ವರ್ಷ ಪೂರ್ಣಗೊಳಿಸಿದ ಶಿಕ್ಷಕರಿಗೆ ಶಾಲೆಗಳಿಗೆ ಸ್ಥಳ ನಿಯುಕ್ತಿಗೊಳಿಸುವ ಕೌನ್ಸಿಲಿಂಗ್‌ನ್ನು ಒಂದೇ ದಿನದಂದು ನಡೆಸುವುದು. ಸದರಿ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಉಲ್ಲೇಖ (2) ಮತ್ತು (3) ರಂತೆ ಜಿಲ್ಲೆಯ ಶೈಕ್ಷಣಿಕ ಆಡಳಿತದ ಹಿತದೃಷ್ಟಿಯಿಂದ ನಿಯಮಾನುಸಾರ ನಡೆಸಿ ಈ ಕಛೇರಿಗೆ ದಿನಾಂಕ : 02–05–2017 ರೊಳಗೆ ವರದಿ ಸಲ್ಲಿಸುವುದು.

ರಾಜ್ಯ ಯೋಜನಾ ನಿರ್ದೇಶಕರು
ಸರ್ವ ಶಿಕ್ಷಣ ಅಭಿಯಾನ ಹಾಗೂ
ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ,
ಬೆಂಗಳೂರು.

ಇವರಿಗೆ ಕ್ರಮಕ್ಕಾಗಿ

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ).
3) ರಾಜ,ದ ಎಲ್ಲಾ ಕೇತ, ಶಿಕಣಾಧಿಕಾರಿಗಳ ಅಗತ, ಕಮಕಾಗಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
4) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.
5) ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು.
6) ನಿರ್ದೇಶಕರು, ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು.
7) ನಿರ್ದೇಶಕರು (ಕಾ), ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು.
8) ಕಛೇರಿ ಪ್ರತಿ.